ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE : 17/02/2020

ಇಂದಿನಿಂದ ಅಧಿವೇಶನ । ತರಾಟೆಗೆ ಸಜ್ಜಾದ ಕಾಂಗ್ರೆಸ್ । ಸಮರ್ಥನೆಗೆ ಬಿಜೆಪಿಯೂ ತಯಾರಿ

# ಸದನದಲ್ಲಿ ಪೌರತ್ವ ಜಟಾಪಟಿಯ ಸೂಚನೆ

**ವಿಕ ಸುದ್ದಿಲೋಕ** ಬೆಂಗಳೂರು

ಸೋಮವಾರದಿಂದ ಆರಂಭಗೊಳ್ಳುವ ರಾಜ್ಯ ವಿಧಾನಮಂಡಲ ಅಧಿವೇಶನವನ್ನು ಕಾಂಗ್ರೆಸ್ ಗಂಭೀರವಾಗಿ ಪರಿಗಣಿಸಿದ್ದು, ಇದೇ ಮೊದಲ ಬಾರಿಗೆ ಸಾಕಷ್ಟು ಸಿದ್ಧತೆಯೊಂದಿಗೆ ಅಖಾಡಕ್ಕೆ ಇಳಿಯಲು ನಿರ್ಧರಿಸಿದೆ. ದೇಶದ ಇತರ ರಾಜ್ಯಗಳಲ್ಲಿ ನಡೆದಂತೆ ಕರ್ನಾಟಕ ವಿಧಾನಮಂಡಲದಲ್ಲೂ ಪೌರತ್ವ ಕಾಯಿದೆ ಜಾರಿ ವಿಚಾರದಲ್ಲಿ ಹೋರಾಟ ನಡೆಸಲು ನಿರ್ಧರಿಸಲಾಗಿದ್ದು ಸದನದಲ್ಲಿ ಭಾರಿ ಗದ್ದಲ ಏರ್ಪಡುವ ಮುನ್ಸೂಚನೆ ಲಭಿಸಿದೆ.

ಈ ಹಿನ್ನೆಲೆಯಲ್ಲಿ ಭಾನುವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಸಲಾಗಿದ್ದು, ಸದನದಲ್ಲಿ ಅನುಸರಿಸಬೇಕಾದ ತಂತ್ರಗಾರಿಕೆ ಬಗ್ಗೆ ಚರ್ಚೆ ನಡೆಸಲಾಗಿದೆ. ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್, ಪರಿಷತ್ ಪ್ರತಿಪಕ್ಷನಾಯಕ ಎಸ್.ಆರ್.ಪಾಟೀಲ್, ಪರಮೇಶ್ವರ್, ಮಾಜಿ ಸಚಿವರಾದ ಡಿ.ಕೆ.ಶಿವಕುಮಾರ್, ರಾಮಲಿಂಗಾ ರೆಡ್ಡಿ, ಎಚ್.ಕೆ.ಪಾಟೀಲ್ ಮತ್ತಿತರರು ಭಾಗವಹಿಸಿದ್ದರು.

ರಾಜ್ಯದಲ್ಲಿ ಕಾನೂನು-ಸುವ್ಯವಸ್ಥೆ ಹದಗೆಡುತ್ತಿರುವ ಬಗ್ಗೆ ಸದನದಲ್ಲಿ ಪ್ರಸ್ತಾಪಿಸಲಾಗಿದೆ. ಮಂಗಳೂರು ಗೋಲಿಬಾರ್ ಪ್ರಕರಣ, ಶಾಸಕ ಯು.ಟಿ.ಖಾದರ್ ವಿರುದ್ಧ ದಾಖಲಾದ ದೂರು, ಬೀದರ್ ಶಾಹೀನ್ ಶಾಲೆ, ಪಾಕ್ ಪರ ಘೋಷಣೆ ನಡೆಸಿದ ಕಾಶ್ಮೀರ ವಿದ್ಯಾರ್ಥಿಗಳ ಬಿಡುಗಡೆ ವಿಚಾರದಲ್ಲಿ ಪೊಲೀಸರು ನಡೆದುಕೊಂಡ ರೀತಿಯ ಬಗ್ಗೆ ಚರ್ಚೆಗೆ ಅವಕಾಶ ಕೋರಲು ನಿರ್ಧರಿಸಲಾಗಿದೆ. ಅದೇ ರೀತಿ ಸಿಎಎ ವಿಚಾರದಲ್ಲಿ ರಾಜ್ಯ ಸರಕಾರ ಯಾವುದೇ ಹಂತದಲ್ಲಿ (ರಾಜ್ಯಪಾಲರ ಭಾಷಣವೂ ಒಳಗೊಂಡಂತೆ ) ಪ್ರಸ್ತಾಪಿಸಿದರೂ ಉಭಯ ಸದನದಲ್ಲೂ ಉಗ್ರ ಹೋರಾಟ ನಡೆಸಲು ನಿರ್ಧರಿಸಲಾಗಿದೆ. ಕಲಾಪ ಆರಂಭಕ್ಕೂ ಮುನ್ನ ಮತ್ತೊಮ್ಮೆ ಶಾಸಕಾಂಗ ಪಕ್ಷದ ಸಭೆ ನಡೆಯಲಿವೆ.

**ಪೂರ್ವ ಸಿದ್ಧತೆ:** ಇದೇ ಮೊದಲ ಬಾರಿಗೆ ಅಧಿವೇಶನಕ್ಕೆ ಸಂಬಂಧಪಟ್ಟಂತೆ ಕಾಂಗ್ರೆಸ್ ಸಾಕಷ್ಟು ಪೂರ್ವ ಸಿದ್ಧತೆ ನಡೆಸಿದೆ. ನೆರೆ ಪೀಡಿತ ಪ್ರದೇಶಗಳ ಸ್ಥಿತಿಗತಿ, ಬರ ನಿರ್ವಹಣೆ ವೈಫಲ್ಯ, ಆರ್ಥಿಕ ಸ್ಥಿತಿಗತಿ ಬಗ್ಗೆ ಚರ್ಚೆ ನಡೆಸಲು ಉದ್ದೇಶಿಸಲಾಗಿದೆ. ತಾವು ನೀಡಿದ 'ದರಿದ್ರ ಸರಕಾರ' ಹೇಳಿಕೆಯನ್ನು ಸದನದಲ್ಲಿ ಸಮರ್ಥನೆ ಮಾಡಿಕೊಳ್ಳಲು ಸಿದ್ದರಾಮಯ್ಯ ನಿರ್ಧರಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಆರ್ಥಿಕ ಪರಿಸ್ಥಿತಿ ಬಗ್ಗೆ ಸಾಕಷ್ಟು ಮಾಹಿತಿಯನ್ನು ಕಾಂಗ್ರೆಸ್ ನಾಯಕರು ಸಂಗ್ರಹಿಸಿದ್ದಾರೆ.

**ನಡೆ ಬದಲಿಸಿದ ಸಿದ್ದು :** ಇದೆಲ್ಲದರ ಮಧ್ಯೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಕ್ಷದ ವಲಯದಲ್ಲಿ ತಮ್ಮ ನಡೆ ಬದಲಾಯಿಸಿದ್ದಾರೆ. ವಲಸಿಗ-ಮೂಲ ಎಂಬ ಭೇದ ಅಳಿಸುವ ಉದ್ದೇಶದಿಂದ ಪಕ್ಷದ ಎಲ್ಲ ಹಿರಿಯ ನಾಯಕರ ಜತೆಗೆ ಪ್ರತ್ಯೇಕ ಸಭೆ ನಡೆಸಿದ್ದಾರೆ. ಸಿದ್ದರಾಮಯ್ಯ ಯಾರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳುವುದಿಲ್ಲ, ಚರ್ಚೆ ನಡೆಸುವುದಿಲ್ಲ ಎಂಬೆಲ್ಲ ಆರೋಪಗಳಿಗೆ ಉತ್ತರ ನೀಡುವ ಉದ್ದೇಶದಿಂದಲೇ ಹಿರಿಯ ನಾಯಕರ ಸಭೆ ನಡೆಸಿದ್ದು, ಎಲ್ಲರನ್ನೂ ಒಟ್ಟಿಗೆ ಕರೆದೊಯ್ಯುವ ಪ್ರಯತ್ನ ಆರಂಭಿಸಿದ್ದಾರೆ ಎಂದು ತಿಳಿದು ಬಂದಿದೆ.

## ಪ್ರಮುಖ ನಿರ್ಧಾರ

- ರಾಜ್ಯಪಾಲರ ಭಾಷಣದಲ್ಲಿ ಸಿಎಎ ಪ್ರಸ್ತಾಪವಾದರೆ ತಕ್ಷಣ ಹೋರಾಟ.
- ಮಂಗಳೂರು ಗೋಲಿಬಾರ್, ಶಾಹೀನ್ ಶಾಲೆ ಪ್ರಕರಣದ ಬಗ್ಗೆ ಚರ್ಚೆಗೆ ಬೇಡಿಕೆ.
- ಕಾನೂನು-ಸುವ್ಯವಸ್ಥೆ ವೈಫಲ್ಯ ತರಾಟೆ.
- ಅರ್ಥ ವ್ಯವಸ್ಥೆ ಕುಸಿತದ ಬಗ್ಗೆ ಪ್ರಸ್ತಾಪ
- 'ದರಿದ್ರ ಸರಕಾರ'ದ ಹೇಳಿಕೆ ಸಮರ್ಥನೆ.

## ಎದಿರೇಟು ನೀಡಲು ಬಿಜೆಪಿ ಶಾಸಕರಿಗೆ ಸ್ಪಷ್ಟ ಸೂಚನೆ

**ಬೆಂಗಳೂರು:** ಸಿಎಎ ವಿಚಾರವಾಗಿ ಪ್ರತಿಪಕ್ಷಗಳು ಅನಗತ್ಯವಾಗಿ ಹೋರಾಟ ನಡೆಸಿದರೆ ತಕ್ಕ ರೀತಿಯಲ್ಲಿ ಎದಿರೇಟು ನೀಡುವಂತೆ ಬಿಜೆಪಿ ತನ್ನೆಲ್ಲ ಶಾಸಕರಿಗೆ ಕಟ್ಟಪ್ಪಣೆ ನೀಡಿದೆ.

ಖಾಸಗಿ ಹೋಟೆಲ್‌ನಲ್ಲಿ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಮಾತನಾಡಿದ ಸಿಎಂ ಯಡಿಯೂರಪ್ಪ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರಿಗೆ ಈ ಸೂಚನೆ ನೀಡಿದ್ದಾರೆ. ಪ್ರತಿಪಕ್ಷಗಳು ಸರಕಾರದ ವಿರುದ್ಧ ವಿನಾಕಾರಣ ವಾಗ್ದಾಳಿ ನಡೆಸಲು ಸಿದ್ಧತೆ ನಡೆಸಿವೆ. ಈ ಹಿನ್ನೆಲೆಯಲ್ಲಿ ಎಲ್ಲ ಶಾಸಕರು ಕಡ್ಡಾಯವಾಗಿ ಸದನದಲ್ಲಿ ಹಾಜರಿದ್ದು ಸರಕಾರ ಸಮರ್ಥಿಸಿಕೊಳ್ಳಲು ಸೂಚನೆ ನೀಡಿದ್ದಾರೆ.

ಆಡಳಿತಕ್ಕೆ ಇನ್ನಷ್ಟು ಚುರುಕು ನೀಡಬೇಕೆಂಬುದು ನಿಜ. ಆದರೆ ಸರಕಾರ ಇದುವರೆಗೆ ಸಮರ್ಥವಾಗಿಯೇ ಕಾರ್ಯ ನಿರ್ವಹಿಸಿದೆ. ರಾಜ್ಯದ ಆರ್ಥಿಕ ಪರಿಸ್ಥಿತಿ ಬಗ್ಗೆ ಇಲಾಖಾವಾರು ಸಭೆ ನಡೆಸಿ ಮಾಹಿತಿ ಸಂಗ್ರಹಿಸಿದ್ದೇನೆ. ಜನ ಮೆಚ್ಚುವ ಬಜೆಟ್ ನೀಡಲು ಶಕ್ತಿಮೀರಿ ಪ್ರಯತ್ನ ನಡೆಸುತ್ತಿದ್ದೇನೆ. ಇದಕ್ಕೆ ನಿಮ್ಮ ಸಲಹೆಗಳೇನಾದರೂ ಇದ್ದರೆ ನೀಡಿ ಎಂದು ಹೇಳಿದ್ದಾರೆ.

ಎಲ್ಲದಕ್ಕಿಂತ ಹೆಚ್ಚಾಗಿ ಅಧಿವೇಶನದಲ್ಲಿ ಸರಕಾರದ ಸಮರ್ಥನೆ ಮಾಡಿಕೊಳ್ಳುವಂತೆ ಸಿಎಂ ಯಡಿಯೂರಪ್ಪ ಹಾಗೂ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಎಲ್ಲ ಶಾಸಕರಿಗೆ ಸೂಚನೆ ನೀಡಿದ್ದಾರೆ. ಅನಗತ್ಯ ವಿಚಾರಗಳನ್ನು ಪ್ರಸ್ತಾಪಿಸಿ ಸರಕಾರವನ್ನು ಮುಜುಗರಕ್ಕೆ ಸಿಲುಕಿಸಲು ಪ್ರತಿಪಕ್ಷ ಕಾಂಗ್ರೆಸ್ ಸಿದ್ಧತೆ ನಡೆಸಿದೆ. ಈ ಹಿನ್ನೆಲೆಯಲ್ಲಿ ಎಲ್ಲ ಶಾಸಕರು ಸಾಕಷ್ಟು ಮಾಹಿತಿಯೊಂದಿಗೆ ಸದನಕ್ಕೆ ಪ್ರವೇಶ ಮಾಡಬೇಕು. ಸಚಿವರು ಇಲಾಖಾ ವಿಚಾರಗಳು ಹಾಗೂ ಕ್ಷೇತ್ರ , ಜಿಲ್ಲೆಯ ವಿದ್ಯಮಾನಗಳ ಬಗ್ಗೆ ಮಾಹಿತಿಯೊಂದಿಗೆ ಬರಬೇಕು. ಎಲ್ಲರೂ ಸರಕಾರದ ಬೆನ್ನಿಗೆ ನಿಲ್ಲಬೇಕೆಂದು ಸೂಚನೆ ನೀಡಲಾಗಿದೆ.

**ವಿಪ್ ಜಾರಿ:** ವಿಧಾನ ಪರಿಷತ್‌ಗೆ ನಡೆಯುವ ಚುನಾವಣೆ ಹಿನ್ನೆಲೆಯಲ್ಲಿ ಎಲ್ಲ ಶಾಸಕರಿಗೂ ವಿಪ್ ನೀಡಲಾಗಿದ್ದು, ಡಿಸಿಎಂ ಲಕ್ಷ್ಮಣ ಸವದಿ ಪರ ಮತ ಚಲಾಯಿಸುವಂತೆ ಸೂಚನೆ ನೀಡಲಾಗಿದೆ.

## ವಿಧಾನಮಂಡಲ ಅಧಿವೇಶನ



4